# All India Radio: Bangalore
# Regional Bulletin In Kannada
# 19.09.2026 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ೨೦ನೇ ಆವೃತ್ತಿ ಉದ್ಯೋಗ ಮೇಳಕ್ಕೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಧಾನಿ ಚಾಲನೆ : ಬೆಂಗಳೂರಿನಲ್ಲಿ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ ನೇಮಕಾತಿ ಪತ್ರ ವಿತರಣೆ
2. ಮಂಗಳೂರು ಬಂದರಿಗೆ ಮುಖ್ಯಮಂತ್ರಿ ದಿಢೀರ್ ಭೇಟಿ : ಮೀನುಗಾರರು, ವ್ಯಾಪಾರಿಗಳೊಂದಿಗೆ ಚರ್ಚೆ
3. ಸಹಕಾರ ಪದ್ಧತಿಯಿಂದ ರೈತರ ಪ್ರಗತಿ ಸಾಧ್ಯ : ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಮತ
4. ಇಂದು ಅಂತಾರಾಷ್ಟ್ರೀಯ ಕಡಲತೀರ ಸ್ವಚ್ಛತಾ ದಿನ : ಉಡುಪಿ, ಕಾರವಾರದಲ್ಲಿ ಸ್ವಚ್ಛತಾ ಅಭಿಯಾನ
5. ಕೊಡಗಿನ ದುಬಾರೆ ಆನೆ ಶಿಬಿರ ನಾಳೆಯಿಂದ ಸಾರ್ವಜನಿಕ ವೀಕ್ಷಣೆಗೆ ಲಭ್ಯ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ದೇಶಾದ್ಯಂತ ನಡೆದ ೨೦ನೇ ಆವೃತ್ತಿಯ ಉದ್ಯೋಗ ಮೇಳವನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ಉದ್ಘಾಟಿಸಿದರು. ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಅಭ್ಯರ್ಥಿಗಳಿಗೆ ೫೧ ಸಾವಿರಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ಈ ಬಾರಿ ವಿತರಿಸಲಾಗಿದೆ.

ಇದೇ ವೇಳೆ ಮಾತನಾಡಿದ ಪ್ರಧಾನಿ, ದೇಶದ ಯುವಜನತೆಯ, ಪ್ರತಿಭೆ ಮತ್ತು ಕೌಶಲ್ಯಗಳು ಜಾಗತಿಕ ವಿಶ್ವಾಸವನ್ನು ಗಳಿಸಿದೆ ಎಂದು ತಿಳಿಸಿದ್ದಾರೆ. ಬೆಂಗಳೂರಿನ ಜಾಲಹಳ್ಳಿಯಲ್ಲಿರುವ ನಾಸಿನ್ ವಲಯ ಕ್ಯಾಂಪಸ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೇಂದ್ರ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ, ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಿದರು. ಇನ್ನೊಂದೆಡೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿವಿಧ ಇಲಾಖೆಗಳ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಿದರು.

<><><><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಬೆಳಗ್ಗೆ ಮಂಗಳೂರಿನ ಬಂದರಿಗೆ ದಿಢೀರ್ ಭೇಟಿ ನೀಡಿ, ಮೀನುಗಾರರು ಹಾಗೂ ವ್ಯಾಪಾರಿಗಳೊಂದಿಗೆ ಚರ್ಚೆ ನಡೆಸಿದರು. ಮುಂಜಾನೆಯೇ ಬಂದರಿಗೆ ಭೇಟಿ ನೀಡಿ, ಬೋಟ್‌ನಲ್ಲಿ ಪ್ರಯಾಣ ಮಾಡುವ ಮೂಲಕ ಬಂದರು ಅಭಿವೃದ್ಧಿಗೆ ಈಗಾಗಲೇ ಕೈಗೊಂಡಿರುವ ಕ್ರಮಗಳು ಹಾಗೂ ಅಭಿವೃದ್ಧಿ ಯೋಜನೆಗಳ ಬಗ್ಗೆ ಅಧಿಕಾರಿಗಳು ಹಾಗೂ ಮೀನುಗಾರರ ಮುಖಂಡರಿಂದ ಮಾಹಿತಿ ಪಡೆದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ವಿವಿಧ ಮೂಲೆಗಳಿಂದ ಇಲ್ಲಿಗೆ ಬಂದು ವ್ಯಾಪಾರಿಗಳು ವ್ಯಾಪಾರ ವಹಿವಾಟು ನಡೆಸುತ್ತಿದ್ದಾರೆ. ಇವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಕರಾವಳಿ ರಾಜ್ಯ ಮಾತ್ರವಲ್ಲ ದೇಶದ ಸಂಪತ್ತು ಎಂದು ಅಭಿಪ್ರಾಯಪಟ್ಟರು.

<><><><>

ಸಹಕಾರ ಪದ್ಧತಿಯಿಂದ ರೈತರ ಪ್ರಗತಿ ಸಾಧ್ಯ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ತೀರ್ಥಹಳ್ಳಿ ತಾಲೂಕು, ವ್ಯವಸಾಯೋತ್ಪನ್ನ, ಮಾರಾಟ ಸಹಕಾರ ಸಂಘದ, ಅಮೃತ ಮಹೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಜೊತೆಗೂಡಿ ಕೆಲಸ ಮಾಡುವುದು ಯಶಸ್ಸು. ಇದೇ ಸಹಕಾರ ತತ್ವ ಎಂದು ಅಭಿಪ್ರಾಯಪಟ್ಟರು. ಕಬ್ಬಿನ ಕಾರ್ಖಾನೆಗಳು ಸಹಕಾರಿ ಪದ್ಧತಿಯಲ್ಲಿ ನಡೆದುಬಂದು ರೈತರನ್ನು ಕಾಪಾಡಿದೆ. ಮಲೆನಾಡು ಭಾಗದಲ್ಲಿ ಬಸ್, ಆಸ್ಪತ್ರೆ, ಬ್ಯಾಂಕ್‌ಗಳು ಸಹಕಾರಿ ಪದ್ಧತಿಯಲ್ಲಿ ನಡೆಯುತ್ತಿದ್ದು, ಇದು ಈ ಭಾಗದ ಹೆಗ್ಗಳಿಕೆಯಾಗಿದೆ ಎಂದು ತಿಳಿಸಿದರು.

<><><><>

ಉಡುಪಿ ಜಿಲ್ಲಾಡಳಿತ, ಮಣಿಪಾಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಭಾರತೀಯ ರಾಷ್ಟ್ರೀಯ ಸಾಗರ ಮಾಹಿತಿ ಸೇವೆಗಳ ಕೇಂದ್ರ, ಭಾರತೀಯ ಪೃಥ್ವಿ ವಿಜ್ಞಾನ ಸಚಿವಾಲಯ, ಅಂಚೆ ಇಲಾಖೆ ಉಡುಪಿ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಸಹಭಾಗಿತ್ವದಲ್ಲಿ ಮಲ್ಪೆ ಕಡಲ ಕಿನಾರೆಯಲ್ಲಿ ಇಂದು 'ಸ್ವಚ್ಛ ಸಾಗರ ಸುರಕ್ಷಿತ ಸಾಗರ' ಧ್ಯೇಯ ವಾಕ್ಯದಡಿ ಬೀಚ್ ಕ್ಲೀನಿಂಗ್ ಕಾರ್ಯಕ್ರಮ ನಡೆಯಿತು. ಅಭಿಯಾನದ ಅಂಗವಾಗಿ ಮಲ್ಪೆ ಕಡಲ ತೀರದಲ್ಲಿ ಸಂಗ್ರಹವಾಗಿದ್ದ ಪ್ಲಾಸ್ಟಿಕ್ ಬಾಟಲಿಗಳು, ಪ್ಲಾಸ್ಟಿಕ್ ಚೀಲಗಳು, ಹಾಗೂ ಇತರ ತ್ಯಾಜ್ಯವನ್ನು ಸ್ವಯಂಸೇವಕರು ತೆರವುಗೊಳಿಸಿದರು. ವಿವಿಧ ಇಲಾಖೆಗಳ ಅಧಿಕಾರಿಗಳು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ವಿದ್ಯಾರ್ಥಿಗಳು, ಸ್ವಯಂಸೇವಕರು ಹಾಗೂ ಸಾರ್ವಜನಿಕರು ಅಭಿಯಾನದಲ್ಲಿ ಪಾಲ್ಗೊಂಡರು.

<><><><>

ಉತ್ತರಕನ್ನಡ ಜಿಲ್ಲೆ ಕಾರವಾರದ ರವೀಂದ್ರನಾಥ ಟಾಗೋರ್ ಕಡಲತೀರದಲ್ಲಿ ಇಂದು 'ಸ್ವಚ್ಛ ಸಾಗರ, ಸುರಕ್ಷಿತ ಸಾಗರ ೫.೦ ಹಾಗೂ ಅಂತಾರಾಷ್ಟ್ರೀಯ ಕಡಲತೀರ ಸ್ವಚ್ಛತಾ ಕಾರ್ಯಕ್ರಮ ನಡೆಯಿತು. ಕೇಂದ್ರ ಸರ್ಕಾರದ ಭೂ ವಿಜ್ಞಾನ ಸಚಿವಾಲಯದ ನೇತೃತ್ವದಲ್ಲಿ ನಡೆಯುತ್ತಿರುವ ರಾಷ್ಟ್ರವ್ಯಾಪಿ ಅಭಿಯಾನದ ಅಂಗವಾಗಿ ಪರಿಸರ ಇಲಾಖೆ, ಅರಣ್ಯ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾಲೇಜು ವಿದ್ಯಾರ್ಥಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಹಭಾಗಿತ್ವದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಸ್ವಚ್ಛತಾ ಅಭಿಯಾನದಲ್ಲಿ ವಿದ್ಯಾರ್ಥಿಗಳು, ಶಿಕ್ಷಕರು, ಪರಿಸರ ಪ್ರೇಮಿಗಳು, ಸಾರ್ವಜನಿಕರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಸದಸ್ಯರೂ ಸೇರಿದಂತೆ ೨೦೦ಕ್ಕೂ ಹೆಚ್ಚು ಮಂದಿ ಭಾಗವಹಿಸಿದರು. ಕಡಲತೀರದಲ್ಲಿ ಬಿದ್ದಿದ್ದ ಪ್ಲಾಸ್ಟಿಕ್ ಒಳಗೊಂಡು, ವಿವಿಧ ತ್ಯಾಜ್ಯಗಳನ್ನು ಸಂಗ್ರಹಿಸಿದರು. ಅಭಿಯಾನದ ಸಂಯೋಜಕ ಡಾ. ಜಗನ್ನಾಥ ರಾಠೋಡ ಮಾತನಾಡಿ, ಕಡಲತೀರಗಳು ಪ್ರಕೃತಿಯ ಅಮೂಲ್ಯ ಕೊಡುಗೆಯಾಗಿದ್ದು, ಕರಾವಳಿ ಪ್ರದೇಶದ ಪರಿಸರ ಸಮತೋಲನದ ಜೊತೆಗೆ ಲಕ್ಷಾಂತರ ಜನರ ಜೀವನೋಪಾಯಕ್ಕೂ ಆಧಾರವಾಗಿವೆ ಎಂದು ತಿಳಿಸಿದರು.

<><><><>

ಕೊಡಗು ಜಿಲ್ಲೆ ಪ್ರವಾಸಿಗರ ಪ್ರಮುಖ ಆಕರ್ಷಣೆಯಾಗಿರುವ ದುಬಾರೆ ಆನೆ ಶಿಬಿರವನ್ನು ನಾಳೆಯಿಂದ ಸಾರ್ವಜನಿಕರ ವೀಕ್ಷಣೆಗೆ ಪುನರಾರಂಭಿಸಲು ಅರಣ್ಯ ಇಲಾಖೆ ನಿರ್ಧರಿಸಿದೆ. ಆನೆ ಶಿಬಿರಗಳಿಗಾಗಿ ರಾಜ್ಯ ಸರ್ಕಾರದಿಂದ ರೂಪಿಸಲಾಗಿರುವ ಪ್ರಮಾಣಿತ ಕಾರ್ಯಾಚರಣಾ ವಿಧಾನ ಅನುಷ್ಠಾನಗೊಳಿಸಿದ ನಂತರ ದುಬಾರೆ ಆನೆ ಶಿಬಿರವನ್ನು ಪುನರಾರಂಭಿಸಲಾಗುತ್ತಿದೆ. ಆರಂಭಿಕ ಹಂತದಲ್ಲಿ ಬೆಳಗಿನ ಅವಧಿಯಲ್ಲಿ ೯.೩೦ ರಿಂದ ೧೧.೩೦ ರವರೆಗೆ ಮಾತ್ರ ಶಿಬಿರದ ಚಟುವಟಿಕೆಗಳನ್ನು ನಡೆಸಲು ನಿರ್ಧರಿಸಲಾಗಿದೆ. ಹೊಸ ನಿಯಮಗಳ ಪ್ರಕಾರ ಸಾರ್ವಜನಿಕರು ಮತ್ತು ಆನೆಗಳ ನಡುವೆ ಯಾವುದೇ ರೀತಿಯ ನೇರ ಸಂಪರ್ಕಕ್ಕೆ ಅವಕಾಶ ಇರುವುದಿಲ್ಲ. ಪ್ರವಾಸಿಗರಿಂದ ಆನೆಗಳಿಗೆ ಸ್ನಾನ ಮಾಡಿಸುವುದು ಹಾಗೂ ಆಹಾರ ನೀಡುವುದನ್ನು ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ ಎಂದು ಅರಣ್ಯಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><><><>

ತುಮಕೂರು ಜಿಲ್ಲಾಡಳಿತ ಹಾಗೂ ಪ್ರಜಾ ಸೇವಾ ಇಲಾಖೆ ವತಿಯಿಂದ ಕುಣಿಗಲ್ ತಾಲ್ಲೂಕಿನ ಹುಲಿಯೂರು ದುರ್ಗದಲ್ಲಿ ಆಯೋಜಿಸಿದ್ದ ಪ್ರಜಾಸೇವಾ ಆಂದೋಲನ ಸಭೆಗೆ ಮಾನ್ಯ ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಚಾಲನೆ ನೀಡಿದರು. ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ, ಅವರ ಕುಂದು-ಕೊರತೆಗಳನ್ನು ಆಲಿಸಿದರು. ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಸಾರ್ವಜನಿಕರು ತಮಗೆ ಸರ್ಕಾರದಿಂದ ಸಿಗಬೇಕಾದ ನೆರವು ಮತ್ತು ಸವಲತ್ತುಗಳು ಹಾಗೂ ವಿವಿಧ ಸಮಸ್ಯೆಗಳನ್ನು ಉಪಮುಖ್ಯಮಂತ್ರಿಗಳ ಗಮನಕ್ಕೆ ತಂದರು. ಸಾರ್ವಜನಿಕರಿಂದ ಸ್ವೀಕರಿಸಿದ ಪ್ರತಿಯೊಂದು ಅರ್ಜಿಯನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಪರಿಶೀಲಿಸಿ, ಅರ್ಹ ಪ್ರಕರಣಗಳಲ್ಲಿ ಕಾಲಮಿತಿಯೊಳಗೆ ತ್ವರಿತವಾಗಿ ವಿಲೇವಾರಿ ಮಾಡುವಂತೆ ಸೂಚನೆ ನೀಡಿದರು. ಯಾವುದೇ ಅರ್ಹ ವ್ಯಕ್ತಿ ಸರ್ಕಾರಿ ಸೇವೆಗಳಿಂದ ವಂಚಿತರಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

<><><><>

ಪ್ರಧಾನಿ ನರೇಂದ್ರ ಮೋದಿ ಅವರು, ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಇದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದು ಬಾಹ್ಯಾಕಾಶ ವಲಯದಲ್ಲಿ ಖಾಸಗಿ ಸಹಭಾಗಿತ್ವಕ್ಕೆ ಅವಕಾಶ ಕಲ್ಪಿಸುವುದರ ಕುರಿತ ಒಂದು ನೋಟ. ೨೦೨೦ರಲ್ಲಿ ಆರಂಭವಾಗಿ ಭಾರತೀಯ ಬಾಹ್ಯಾಕಾಶ ನೀತಿ ೨೦೨೩ರಡಿಯಲ್ಲಿ ರೂಪುಗೊಂಡಿರುವ ಬಾಹ್ಯಾಕಾಶ ವಲಯದ ಸುಧಾರಣೆಗಳು ದೇಶದ ಬಾಹ್ಯಾಕಾಶ ಕಾರ್ಯಕ್ರಮವನ್ನು ಸರ್ಕಾರದ ಏಕಸ್ವಾಮ್ಯದಿಂದ ಕ್ರಿಯಾಶೀಲ ಹಾಗೂ ಸ್ಪರ್ಧಾತ್ಮಕ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ವ್ಯವಸ್ಥೆಯನ್ನಾಗಿ ಪರಿವರ್ತಿಸಿದೆ. ಬಾಹ್ಯಾಕಾಶ ವಲಯದ ಸುಧಾರಣೆಗಳು, ಬಾಹ್ಯಾಕಾಶ ತಂತ್ರಜ್ಞಾನದ ಅಭಿವೃದ್ಧಿಗೆ ನೆರವಾಗುತ್ತಿದೆ. ಐಐಟಿ ಮದ್ರಾಸ್‌ನ ಇಂಜಿನಿಯರ್‌ಗಳ ತಂಡ ಸ್ಥಾಪಿಸಿದ ಗ್ಯಾಲಕ್ಸ್-ಐ ಎಂಬ ಬಾಹ್ಯಾಕಾಶ ನವೋದ್ಯಮ ಸಂಸ್ಥೆಯು ವಿಶ್ವದ ಮೊದಲ ಆಪ್ಟೋ ಸ್ಟಾರ್ ಉಪಗ್ರಹವಾದ ಮಿಷನ್ ದೃಷ್ಟಿಯನ್ನು ಅಭಿವೃದ್ಧಿಪಡಿಸಿರುವುದು ಇದಕ್ಕೆ ಸಾಕ್ಷಿಯಾಗಿದೆ. ಈ ಕುರಿತಂತೆ ಗ್ಯಾಲಕ್ಸಿ-ಐನ ಸಹ ಸಂಸ್ಥಾಪಕ ಸುಯಶ್ ಸಿಂಗ್ ಆಕಾಶವಾಣಿಯೊಂದಿಗೆ ಹೆಚ್ಚಿನ ಮಾಹಿತಿ ಹಂಚಿಕೊಂಡಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ಮತದಾರರ ಜಾಗೃತಿ ಕಾರ್ಯಕ್ರಮದ ಅಂಗವಾಗಿ "ಗಟ್ಟಿ ಪ್ರಜಾಪ್ರಭುತ್ವಕ್ಕಾಗಿ ಓಟ" ಎಂಬ ಸಂದೇಶದೊಂದಿಗೆ ನಾಳೆ ಬಳ್ಳಾರಿ ನಗರದಲ್ಲಿ ಮ್ಯಾರಥಾನ್ ನಡೆಯಲಿದೆ.
2. ಇದೇ ೨೧ ರಂದು ನಿಗದಿಯಾಗಿದ್ದ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ೬ನೇ ಘಟಿಕೋತ್ಸವ ಕಾರ್ಯಕ್ರಮವನ್ನು ಅನಿವಾರ್ಯ ಕಾರಣಗಳಿಂದ ಮುಂದೂಡಲಾಗಿದೆ ಎಂದು ವಿಶ್ವವಿದ್ಯಾಲಯದ ಕುಲಸಚಿವರು ತಿಳಿಸಿದ್ದಾರೆ. ಮುಂದಿನ ದಿನಾಂಕವನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
3. ಕ್ರೀಡೆಯಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಸುಧಾರಿಸುವುದರ ಜೊತೆಗೆ ಆತ್ಮವಿಶ್ವಾಸ, ಶಿಸ್ತು ಮತ್ತು ತಂಡದ ಮನೋಭಾವ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ತಿಳಿಸಿದ್ದಾರೆ.
4. ಭಾರತೀಯ ಜನತಾ ಪಕ್ಷದ ಯುವ ಮೋರ್ಚಾ ವತಿಯಿಂದ ಚಿತ್ರದುರ್ಗ ನಗರದ ಡಿಸಿ ಸರ್ಕಲ್ ಬಳಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಳ್ಳಲಾಗಿರುವ ಸೇವಾ ಸಂಕಲ್ಪ ಅಭಿಯಾನ'ದ ಭಾಗವಾಗಿ ಈ ಶಿಬಿರ ನಡೆಯಿತು.
5. ಗ್ರಾಮೀಣ ಸಮುದಾಯಗಳಲ್ಲಿ ಶುಚಿತ್ವ ಹಾಗೂ ಉತ್ತಮ ನೈರ್ಮಲ್ಯ ಅಭ್ಯಾಸಗಳನ್ನು ರೂಢಿಸುವ ನಿಟ್ಟಿನಲ್ಲಿ ಅಕ್ಟೋಬರ್ ೨ ರವರೆಗೆ ಜಿಲ್ಲೆಯಲ್ಲಿ 'ಸ್ವಚ್ಛತಾ ಹಿ ಸೇವಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಕೋಲಾರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ. ಅಧಿಕಾರಿ ಡಾ.ಪ್ರವೀಣ್. ಪಿ. ಬಾಗೇವಾಡಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>